**National**
**Kannada**
**07.010.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

1. 2047ರ ವೇಳೆಗೆ ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲಿದೆ – ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ
2. ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರ ಬಲವರ್ಧನೆಗೆ ಎರಡು ತಿಳುವಳಿಕೆ ಒಪ್ಪಂದಗಳಿಗೆ ಭಾರತ, ಘಾನಾ ಸಹಿ
3. ಫ್ರಾನ್ಸ್‌ನ ಹೆನ್ರಿ ಬಿ. ಕಗನ್, ಜಪಾನ್‌ನ ಕೆನ್ಸೊ ಸೋಯಿ ಅವರಿಗೆ 2026ರ ರಸಾಯನಶಾಸ್ತ್ರ ನೊಬೆಲ್ ಪ್ರಶಸ್ತಿ
4. ಹವಾಮಾನ ಬದಲಾವಣೆ ತಡೆಗೆ ಕೈಗೊಳ್ಳುವ ಕ್ರಮಗಳನ್ನು ಮತ್ತಷ್ಟು ಬಲಪಡಿಸುವಂತೆ ಜಗತ್ತಿನ ರಾಷ್ಟ್ರಗಳಿಗೆ ಭಾರತ ಕರೆ

---

ದೂರದೃಷ್ಟಿಯ ನೀತಿಗಳು ಮತ್ತು ಕಠಿಣ ಪರಿಶ್ರಮದ ಮೂಲಕ 2047ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ತನ್ನ ಕನಸನ್ನು ಭಾರತ ಖಂಡಿತವಾಗಿಯೂ ಸಾಕಾರಗೊಳಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ 'ವಿಕಸಿತ ಭಾರತ್ ಸಂಕಲ್ಪ ಸಭೆ' ಉದ್ದೇಶಿಸಿ ಮಾತನಾಡಿದ ಅವರು, ಕಳೆದ 12 ವರ್ಷಗಳಲ್ಲಿ ಪರಿಸ್ಥಿತಿ ಸಂಪೂರ್ಣವಾಗಿ ಬದಲಾಗಿದೆ. ಈ ಹಿಂದೆ ಆಮದುಗಳನ್ನು ಹೆಚ್ಚಿಸುವ ಪ್ರಯತ್ನಗಳು ನಡೆಯುತ್ತಿದ್ದವು, ಆದರೆ ಇಂದು ಭಾರತ, ರಫ್ತಿನಲ್ಲಿ ಹೊಸ ದಾಖಲೆಗಳನ್ನು ಸೃಷ್ಟಿಸುತ್ತಿದೆ ಎಂದು ಹೇಳಿದರು.

ಇಂದು 'ಮೇಡ್ ಇನ್ ಇಂಡಿಯಾ' ಮೊಬೈಲ್ ಫೋನ್‌ಗಳು ಜಾಗತಿಕ ಮಾರುಕಟ್ಟೆಯಲ್ಲಿ ಬಲವಾದ ಅಸ್ತಿತ್ವವನ್ನು ಹೊಂದಿವೆ. 2015 ರಿಂದ 2025ರವರೆಗಿನ ದಶಕವು ಸ್ವಾತಂತ್ರ್ಯದ ನಂತರದ ಅತಿ ಹೆಚ್ಚಿನ ಮತ್ತು ನಿರಂತರ ಕೃಷಿ ಬೆಳವಣಿಗೆಗೆ ಸಾಕ್ಷಿಯಾಗಿದೆ ಹಾಗೂ ಇದು ಹಿಂದಿನ ಎಲ್ಲಾ ದಾಖಲೆಗಳನ್ನು ಸರಿಗಟ್ಟಿದೆ ಎಂದು ತಿಳಿಸಿದರು.

ಕಳೆದ 25 ವರ್ಷಗಳಲ್ಲಿ ಗಳಿಸಿದ ಜನರ ವಿಶ್ವಾಸ ಮತ್ತು ಅನುಭವ ತಮ್ಮ ಪಾಲಿಗೆ ಬಹುದೊಡ್ಡ ಆಸ್ತಿಯಾಗಿದೆ. ಪ್ರಸ್ತುತ ಕೇಂದ್ರ ಸರ್ಕಾರದ ನೀತಿಗಳು, ಎಲ್ಲಾ ನಾಗರಿಕರ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳುವುದರ ಮೇಲೆ ಕೇಂದ್ರೀಕರಿಸಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

---

ಜಾಗತಿಕ ಬಿಕ್ಕಟ್ಟಿನ ಹೊರತಾಗಿಯೂ ಭಾರತ, ವಿಶ್ವದ ಅಗ್ರ ಐದು ಆರ್ಥಿಕತೆಗಳಲ್ಲಿ ಒಂದಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಉತ್ತರ ಪ್ರದೇಶದ ಗಾಜಿಯಾಬಾದ್‌ನಲ್ಲಿ ಇಂದು ನಡೆದ 'ವಿಕಸಿತ ಭಾರತ ಸಂಕಲ್ಪ ಸಭೆ' ಉದ್ದೇಶಿಸಿ ಮಾತನಾಡಿದ ಅವರು, ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಪರಿವರ್ತಿಸುವುದು ಕೇಂದ್ರ ಸರ್ಕಾರದ ಗುರಿಯಾಗಿದೆ ಎಂದು ತಿಳಿಸಿದರು.

ಪಶ್ಚಿಮ ಏಷ್ಯಾ ಬಿಕ್ಕಟ್ಟು ಉಂಟಾಗದಿದ್ದಲ್ಲಿ, ಆರ್ಥಿಕತೆಯ ಗಾತ್ರದ ದೃಷ್ಟಿಯಿಂದ ಭಾರತ, ವಿಶ್ವದ ಅಗ್ರ ಮೂರು ಸ್ಥಾನಗಳಲ್ಲಿ ಒಂದಾಗಿರುತ್ತಿತ್ತು. ಪ್ರಸ್ತುತ ಭಾರತದ ಆರ್ಥಿಕತೆ ಶೇಕಡಾ 7.4 ರಷ್ಟು ದರದಲ್ಲಿ ಬೆಳೆಯುತ್ತಿದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

---

ವೈಜ್ಞಾನಿಕ ಸಂಶೋಧನೆ, ಶೈಕ್ಷಣಿಕ ಕ್ಷೇತ್ರ, ಸಾಮರ್ಥ್ಯ ವರ್ಧನೆ ಹಾಗೂ ಕೃಷಿ ಸಂಶೋಧನೆ ಮತ್ತು ಶಿಕ್ಷಣದಲ್ಲಿ ಸಹಕಾರ ಬಲಪಡಿಸಲು ಭಾರತ ಮತ್ತು ಘಾನಾ ಎರಡು ತಿಳುವಳಿಕೆ ಒಪ್ಪಂದಗಳನ್ನು ವಿನಿಮಯ ಮಾಡಿಕೊಂಡಿವೆ.

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರ ಘಾನಾ ಭೇಟಿಯ ಸಂದರ್ಭದಲ್ಲಿ ಈ ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಘಾನಾ ವಿದೇಶಾಂಗ ಸಚಿವ ಸ್ಯಾಮ್ ಒಕುಡ್ಜೆಟೊ ಅಬ್ಲಾಕ್ವಾ ಅವರೊಂದಿಗೆ ಒಪ್ಪಂದಗಳ ವಿನಿಮಯ ಪ್ರಕ್ರಿಯೆಗೆ ಡಾ. ಜೈಶಂಕರ್ ಸಾಕ್ಷಿಯಾದರು.

ಈ ಒಪ್ಪಂದಗಳು 'ಝೂಲಾಜಿಕಲ್ ಸರ್ವೆ ಆಫ್ ಇಂಡಿಯಾ' ಮತ್ತು ಘಾನಾ ವಿಶ್ವವಿದ್ಯಾಲಯದ ನಡುವೆ ಶೈಕ್ಷಣಿಕ, ವೈಜ್ಞಾನಿಕ ಸಂಶೋಧನೆ ಮತ್ತು ಸಾಮರ್ಥ್ಯ ವರ್ಧನೆಯ ಸಹಕಾರ ಹಾಗೂ ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮತ್ತು ಘಾನಾದ ಬೆಳೆ ಸಂಶೋಧನಾ ಸಂಸ್ಥೆ ನಡುವೆ ಕೃಷಿ ಸಂಶೋಧನೆ ಮತ್ತು ಶಿಕ್ಷಣದಲ್ಲಿನ ಸಹಯೋಗ ಒಳಗೊಂಡಿವೆ.

ಇದೇ ವೇಳೆ ಉಭಯ ದೇಶಗಳ ನಡುವೆ ವ್ಯಾಪಾರ, ಹೂಡಿಕೆ, ಅಭಿವೃದ್ಧಿ, ಔಷಧೀಯ ವಲಯ, ಸಾಮರ್ಥ್ಯ ವರ್ಧನೆ, ರಕ್ಷಣೆ, ತಂತ್ರಜ್ಞಾನ ಮತ್ತು ಜನರ ನಡುವಿನ ಬಾಂಧವ್ಯದಲ್ಲಿ ಸಹಕಾರ ಹೆಚ್ಚಿಸುವ ಮಾರ್ಗಗಳ ಬಗ್ಗೆಯೂ ಇಬ್ಬರೂ ಸಚಿವರು ಚರ್ಚಿಸಿದರು.

---

2026 ರ ರಸಾಯನಶಾಸ್ತ್ರದ ನೊಬೆಲ್ ಪ್ರಶಸ್ತಿಯನ್ನು ಫ್ರಾನ್ಸ್‌ನ  ರಸಾಯನಶಾಸ್ತ್ರಜ್ಞ ಹೆನ್ರಿ ಬಿ. ಕಗನ್ ಮತ್ತು ಜಪಾನಿನ ರಸಾಯನಶಾಸ್ತ್ರಜ್ಞ ಕೆನ್ಸೊ ಸೋಯಿ ಭಾಜನರಾಗಿದ್ದಾರೆ.

ಹೋಮೋಕಿರಾಲಿಟಿ, ಪ್ರಕೃತಿಯಲ್ಲಿ ಹೇಗೆ ಸ್ವಯಂಪ್ರೇರಿತವಾಗಿ ಹೊರಹೊಮ್ಮಬಹುದು ಎಂಬುದರ ಬಗ್ಗೆ ಹೆನ್ರಿ ಬಿ. ಕಗನ್ ಮತ್ತು ಕೆನ್ಸೊ ಸೋಯಿ ಶತಮಾನಗಳಷ್ಟು ಹಳೆಯದಾದ ರಹಸ್ಯವನ್ನು ಪರಿಹರಿಸಿದ್ದಾರೆ. ಇಬ್ಬರು ಪ್ರಶಸ್ತಿ ವಿಜೇತರು 12 ಮಿಲಿಯನ್ ಸ್ವೀಡಿಷ್ ಕ್ರೋನರ್ ಬಹುಮಾನವನ್ನು ಹಂಚಿಕೊಳ್ಳಲಿದ್ದಾರೆ ಎಂದು ರಾಯಲ್ ಸ್ವೀಡಿಷ್ ಅಕಾಡೆಮಿ ಆಫ್ ಸೈನ್ಸಸ್ ತಿಳಿಸಿದೆ.

---

ಹವಾಮಾನ ಬದಲಾವಣೆ ತಡೆಗೆ ಕೈಗೊಳ್ಳುವ ಕ್ರಮಗಳನ್ನು ಮತ್ತಷ್ಟು ಬಲಪಡಿಸುವಂತೆ ಮತ್ತು ಪ್ಯಾರಿಸ್ ಒಪ್ಪಂದವನ್ನು ತ್ವರಿತವಾಗಿ ಅನುಷ್ಠಾನಗೊಳಿಸುವಂತೆ ಜಗತ್ತಿನ ರಾಷ್ಟ್ರಗಳಿಗೆ ಭಾರತ ಕರೆ ನೀಡಿದೆ.

ಫಿಜಿಯಲ್ಲಿ ನಡೆದ ಪ್ರೀ-ಕಾಪ್ 31 ಸಭೆ ಉದ್ದೇಶಿಸಿ ಮಾತನಾಡಿದ ಕೇಂದ್ರ ಪರಿಸರ ಸಚಿವ ಭೂಪೇಂದ್ರ ಯಾದವ್, ಹವಾಮಾನ ಬದಲಾವಣೆಗೆ ಸಂಬಂಧಿಸಿದ ಬದ್ಧತೆಗಳ ಅನುಷ್ಠಾನದಲ್ಲಿನ ಅಂತರವನ್ನು ನಿವಾರಿಸಿ, ಈಗಾಗಲೇ ನೀಡಿರುವ ಬದ್ಧತೆಗಳನ್ನು ಈಡೇರಿಸಬೇಕು. ಜಾಗತಿಕ ತಾಪಮಾನ ಏರಿಕೆಯನ್ನು 1.5 ಡಿಗ್ರಿ ಸೆಲ್ಸಿಯಸ್‌ಗೆ ಸೀಮಿತಗೊಳಿಸುವ ಗುರಿ ಸಾಧನೆಗೆ ವೇಗವಾಗಿ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಹವಾಮಾನ ಬದಲಾವಣೆ ಎದುರಿಸಲು ಸಾಮರ್ಥ್ಯ ವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕು. ಅಗತ್ಯ ಸಂಪನ್ಮೂಲಗಳನ್ನು ಒದಗಿಸುವ ವ್ಯವಸ್ಥೆಯನ್ನೂ ಬಲಪಡಿಸಬೇಕು ಎಂದು ಅವರು ಸಲಹೆ ನೀಡಿದರು.

---

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಹಾಗೂ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ ಕೂಡಿರುವ ಸಾರ್ವಜನಿಕ ಸೇವೆಯ 25 ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ.

ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, 2047ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ.

ಇಂದಿನ ಆವೃತ್ತಿಯಲ್ಲಿ 'ಅಯೋಧ್ಯೆ ರಾಮಮಂದಿರ; ನಾಗರಿಕತೆಯ ಜಾಗೃತಿಯ ಪುನರುತ್ಥಾನ' ಕುರಿತ ವರದಿ ಇಲ್ಲಿದೆ.

ಐದು ಶತಮಾನಗಳ ಸುದೀರ್ಘ ಕಾಯುವಿಕೆಯ ನಂತರ ಅಯೋಧ್ಯೆಯ ಶ್ರೀರಾಮ ಜನ್ಮಭೂಮಿಯಲ್ಲಿ ರಾಮಮಂದಿರ ನಿರ್ಮಾಣಗೊಳ್ಳುವ ಮೂಲಕ ಕೋಟ್ಯಂತರ ಜನರ ಕನಸು ನನಸಾಗಿದೆ. ಶತಮಾನಗಳಿಂದ ಪೀಳಿಗೆಯಿಂದ ಪೀಳಿಗೆಗೆ ಹರಿದುಬಂದ ಈ ಆಶಯ, ಸುಮಾರು 70 ವರ್ಷಗಳ ಕಾಲ ನ್ಯಾಯಾಲಯದಲ್ಲಿ ಇತ್ಯರ್ಥವಾಗದೇ ಉಳಿದಿತ್ತು. ಸರ್ಕಾರ ಈ ಸೂಕ್ಷ್ಮ ವಿಷಯವನ್ನು ಅತ್ಯಂತ ಯೋಜನಾ ಬದ್ಧವಾಗಿ ನಿರ್ವಹಿಸಿ, ಸೌಹಾರ್ದಯುತ ವಾತಾವರಣ ನಿರ್ಮಿಸಿ, ಶಾಂತಿ ಕಾಪಾಡಲು ಎಲ್ಲಾ ಪಾಲುದಾರರಲ್ಲೂ ಮನವಿ ಮಾಡಿತು.

ಪರಿಣಾಮವಾಗಿ 2019ರ ನವೆಂಬರ್‌ನಲ್ಲಿ ಸುಪ್ರೀಂಕೋರ್ಟ್ ಸರ್ವಾನುಮತದ ತೀರ್ಪು ನೀಡಿ, ರಾಮಮಂದಿರ ನಿರ್ಮಾಣಕ್ಕೆ ಜಾಗವನ್ನು ಮೀಸಲಿಟ್ಟಿತು. ದೇಶಾದ್ಯಂತ ಈ ತೀರ್ಪನ್ನು ಶಾಂತಿಯುತವಾಗಿ ಸ್ವೀಕರಿಸಲಾಯಿತು.

2024ರ ಜನವರಿ 22 ರಂದು ಪ್ರಾಣಪ್ರತಿಷ್ಠಾಪನೆ ನೆರವೇರಿತು ಹಾಗೂ 2025ರ ನವೆಂಬರ್‌ನಲ್ಲಿ ಧ್ವಜಾರೋಹಣದೊಂದಿಗೆ ಮಂದಿರದ ಸಂಪೂರ್ಣ ನಿರ್ಮಾಣ ಕಾರ್ಯ ಮುಕ್ತಾಯಗೊಂಡಿತು. 500 ವರ್ಷಗಳ ಬಳಿಕ ಅಯೋಧ್ಯೆಯ ಪವಿತ್ರ ಭೂಮಿಯಲ್ಲಿ ಭಾರತೀಯ ಸಂಸ್ಕೃತಿ ಮತ್ತು ನಾಗರಿಕತೆ ತನ್ನ ಶಾಶ್ವತ ನೆಲೆಯನ್ನು ಕಂಡುಕೊಂಡಿದೆ.

---

ಉಕ್ರೇನ್ ಸಂಘರ್ಷವನ್ನು ಪರಿಹರಿಸಲು ಕೊಡುಗೆ ನೀಡಲು ಭಾರತ ಸಿದ್ಧರಿದ್ದಕ್ಕಾಗಿ ರಷ್ಯಾ ಕೃತಜ್ಞತೆಗಳನ್ನು ವ್ಯಕ್ತಪಡಿಸಿದೆ.

ಬಿಕ್ಕಟ್ಟಿಗೆ ಶಾಂತಿಯುತ ಪರಿಹಾರವನ್ನು ಕಂಡುಕೊಳ್ಳುವ ಗುರಿಯನ್ನು ಹೊಂದಿರುವ ವಿಚಾರಗಳನ್ನು ನೀಡಲು ಭಾರತದ ಇಚ್ಛಾಶಕ್ತಿಯನ್ನು ರಷ್ಯಾ ಶ್ಲಾಘಿಸುತ್ತದೆ ಎಂದು ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್ ಹೇಳಿದ್ದಾರೆ.

---

ಕೊಲೊರಾಡೋ ಡೆನ್ವರ್ ವಿಶ್ವವಿದ್ಯಾಲಯವು, ಹೈದರಾಬಾದ್‌ನಲ್ಲಿ ನೂತನ ಕ್ಯಾಂಪಸ್ ಸ್ಥಾಪಿಸಲು ಯುಜಿಸಿ–ವಿಶ್ವವಿದ್ಯಾಲಯ ಅನುದಾನ ಆಯೋಗದಿಂದ ಅನುಮತಿ ಪತ್ರವನ್ನು ಸ್ವೀಕರಿಸಿದೆ. ಇದು ಭಾರತದಲ್ಲಿ ಪದವಿ ನೀಡುವ ಸ್ಥಳವನ್ನು ಸ್ಥಾಪಿಸಲು ಅಧಿಕಾರ ಹೊಂದಿರುವ ಮೊದಲ ಸಾರ್ವಜನಿಕ ಅಮೆರಿಕನ್ ವಿಶ್ವವಿದ್ಯಾಲಯವಾಗಲಿದೆ. ಈ ಕ್ಯಾಂಪಸ್ ತೆಲಂಗಾಣದಲ್ಲಿ ಮೊದಲ ವಿದೇಶಿ ವಿಶ್ವವಿದ್ಯಾಲಯ ಕ್ಯಾಂಪಸ್ ಆಗಿರುತ್ತದೆ.

ಕೊಲೊರಾಡೋ ಡೆನ್ವರ್ ವಿಶ್ವವಿದ್ಯಾಲಯ ತನ್ನ ಹೈದರಾಬಾದ್ ಕ್ಯಾಂಪಸ್ ನಲ್ಲಿ ವ್ಯವಹಾರ, ಕಂಪ್ಯೂಟಿಂಗ್, ಎಂಜಿನಿಯರಿಂಗ್ ಮತ್ತು ವಿಶ್ಲೇಷಣೆ ಸೇರಿದಂತೆ ಹೆಚ್ಚಿನ ಬೇಡಿಕೆಯ ಕ್ಷೇತ್ರಗಳಲ್ಲಿ ಕೋರ್ಸ್ ಗಳನ್ನು ಆರಂಭಿಸಲಿದೆ.

ಕಳೆದ ವರ್ಷ, ಇಲಿನಾಯ್ಸ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮುಂಬೈನಲ್ಲಿ ಕ್ಯಾಂಪಸ್ ಸ್ಥಾಪಿಸಿದ ಮೊದಲ ಅಮೆರಿಕ ವಿಶ್ವವಿದ್ಯಾಲಯವಾಯಿತು.

---

ನವದೆಹಲಿಯ ಭಾರತ್ ಮಂಟಪದಲ್ಲಿ ನಾಳೆ 57ನೇ ಜಿಎಸ್‌ಟಿ ಮಂಡಳಿಯ ಸಭೆ ನಡೆಯಲಿದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಸಭೆಯಲ್ಲಿ, ಜಿಎಸ್‌ಟಿ ಸಂಬಂಧಿತ ವಿವಾದಗಳನ್ನು ಬಗೆಹರಿಸಲು ಮತ್ತು 'ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್' ಹರಿವನ್ನು ಸುಧಾರಿಸಲು ಅಗತ್ಯವಿರುವ ನೀತಿ ಸುಧಾರಣೆಗಳ ಕುರಿತು ಚರ್ಚಿಸಲಾಗುತ್ತದೆ. ಇದರ ಮುಖ್ಯ ಉದ್ದೇಶ ನಿಯಮಗಳ ಪಾಲನೆಗೆ ತಗಲುವ ಸಮಯ ಮತ್ತು ವೆಚ್ಚವನ್ನು ಕಡಿಮೆ ಮಾಡುವುದಾಗಿದೆ.

ಇದೇ ವೇಳೆ ಜಿಎಸ್‌ಟಿ  ವ್ಯವಸ್ಥೆಯಲ್ಲಿನ ಮುಂದಿನ ಹಂತದ ಸುಧಾರಣೆಗಳಿಗಾಗಿ ಸರ್ಕಾರ, ಐದು ಅಂಶಗಳ ಯೋಜನೆಯನ್ನು ಪ್ರಸ್ತಾಪಿಸಲಿದೆ ಎಂದು ಹಣಕಾಸು ಸಚಿವಾಲಯದ ಮೂಲಗಳು ತಿಳಿಸಿವೆ.

---

ದೇಶದ ಅಭಿವೃದ್ಧಿ ಪಯಣವನ್ನು ರೂಪಿಸುವಲ್ಲಿ ಮಹಿಳೆಯರು ಇಂದು ಮಹತ್ವದ ಪಾತ್ರ ವಹಿಸುತ್ತಿದ್ದಾರೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಹೇಳಿದ್ದಾರೆ.

ನವದೆಹಲಿಯಲ್ಲಿಂದು ನಡೆದ ರಕ್ಷಣಾ ಅಧಿಕಾರಿಗಳ ರಾಷ್ಟ್ರೀಯ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ದೇಶದ ತಾಯಂದಿರು, ಸಹೋದರಿಯರು ಮತ್ತು ಪುತ್ರಿಯರು ಸಬಲೀಕರಣಗೊಂಡಾಗ ಮತ್ತು ಸುರಕ್ಷಿತವಾಗಿದ್ದಾಗ ಮಾತ್ರ 'ಅಭಿವೃದ್ಧಿಶೀಲ ಭಾರತ'ದ ಸಂಕಲ್ಪ ಸಾಕಾರಗೊಳ್ಳುತ್ತದೆ ಎಂದು ಪ್ರತಿಪಾದಿಸಿದರು.

ಮಹಿಳೆಯರಲ್ಲಿ ಭದ್ರತೆ ಮತ್ತು ಘನತೆಯ ಭಾವನೆಯನ್ನು ಮೂಡಿಸುವುದು ಕೇಂದ್ರ ಸರ್ಕಾರದ ಪ್ರಥಮ ಆದ್ಯತೆಯಾಗಿದೆ. ಪ್ರತಿಯೊಂದು ಮನೆಯೂ ಸುರಕ್ಷಿತವಾಗಿರುವುದನ್ನು ಖಚಿತಪಡಿಸುವುದು ಮತ್ತು ಪ್ರತಿಯೊಬ್ಬ ಸಂತ್ರಸ್ತರಿಗೂ ತ್ವರಿತ ನ್ಯಾಯ ದೊರಕಿಸಿಕೊಡುವುದು ಸರ್ಕಾರದ ಸಮಾನ ಗುರಿಯಾಗಿದೆ ಎಂದು ಸಚಿವೆ ಅನ್ನಪೂರ್ಣ ದೇವಿ ಹೇಳಿದರು.

---

ಕ್ಷಯರೋಗ ನಿರ್ಮೂಲನಾ ಕಾರ್ಯದಲ್ಲಿ ಯುವಜನರ ಸಹಭಾಗಿತ್ವ ಹೆಚ್ಚಿಸುವ ಉದ್ದೇಶದಿಂದ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದಿಂದ ನಾಳೆ ಜೋಶ್ ತಂಡಗಳಿಗೆ ಚಾಲನೆ ನೀಡಲಾಗುತ್ತದೆ.

________ ಮುಕ್ತಾಯ ________